# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಸದಸ್ಯರ ಹೆಸರು** | **:** | **ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | **:** | **856 (1104)** |
| **ಉತ್ತರಿಸಬೇಕಾದ ಸಚಿವರು** | **:** | **ಮಾನ್ಯ ಕೃಷಿ ಸಚಿವರು** |
| **ಉತ್ತರಿಸಬೇಕಾದ ದಿನಾಂಕ** | **:** | **23-03-2024.** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯ ಕೃಷಿ ಆಧಾರಿತ ಜಿಲ್ಲೆಯಾಗಿದ್ದು, ಕೃಷಿ ಪದವಿ ಮಹಾವಿದ್ಯಾಲಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಸದರಿ ಜಿಲ್ಲೆಯಲ್ಲಿ ಕೃಷಿ ಡಿಪ್ಲೊಮಾ ಕಾಲೇಜು ಇದ್ದು, ಶೇ.10ರಷ್ಟು ಅಭಿವೃದ್ಧಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ; ಅದನ್ನು ಮುಚ್ಚಿದ ನಂತರ ರೈತರ ಮಕ್ಕಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಇ) | ಈ ಸಮಸ್ಯೆಗೆ ಬೀದರ ಜಿಲ್ಲೆಯಲ್ಲಿ ಪರಿಹಾರವಾಗಿ ಕೃಷಿ ಪದವಿ ಮಹಾವಿದ್ಯಾಲಯ ಪ್ರಾರಂಭ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ; | ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾಲಯಗಳ ಬಲವರ್ಧನೆ/ ಹೊಸ ಕೃಷಿ ಕಾಲೇಜುಗಳ ಸ್ಥಾಪನೆ ಮತ್ತು ಅವುಗಳ ಇನ್ನಿತರ ಅಭಿವೃದ್ಧಿಗೆ ಅಗತ್ಯವಿರುವ ಅಂಶಗಳನ್ನು ಪರಿಶೀಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು(Expert Committee) ರಚಿಸಲಾಗಿರುತ್ತದೆ. ರಾಜ್ಯದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳಲ್ಲಿ ಹೊಸ ಕೃಷಿ ಕಾಲೇಜುಗಳನ್ನು ಸ್ಥಾಪಿಸುವಂತಹ ಪ್ರಸ್ತಾವನೆಗಳನ್ನು ಈ ಸಮಿತಿ ಮುಂದೆ ಮಂಡಿಸಲಾಗುವುದು.<br><br>ಈ ಪರಿಣಿತಿ ಸಮಿತಿಯು ಇದುವರೆವಿಗೂ 6 ಸಭೆಗಳನ್ನು ನಡೆಸಿದ್ದು, ದಿನಾಂಕ:18-12-2019 ರಲ್ಲಿ 5ನೇ ಸಭೆ ಹಾಗೂ ದಿನಾಂಕ:18-06- |

| | | |
|---|---|---|
| | | 2022ರಲ್ಲಿ 6ನೇ ಸಭೆಯನ್ನು ನಡೆಸಿದ್ದು, ಸದರಿ ಸಭೆಗಳಲ್ಲಿ ನೂತನ ಕೃಷಿ ಕಾಜೇಜುಗಳನ್ನು ಪ್ರಾರಂಭಿಸುವ ಮುಂಚೆ ಈಗಿರುವ ಕೃಷಿ ಕಾಲೇಜುಗಳ ಬಲವರ್ಧನೆಗೆ ಇರುವಂತಹ ಕೊರತೆಗಳನ್ನು ಗಮನಿಸಿ,<br>1) ಮೂಲಭೂತ ಸೌಕರ್ಯಗಳು:<br>2) ಬೋಧಕ ಸಿಬ್ಬಂದಿಯ ಪ್ರಮಾಣ<br>ಈಗಿರುವ ಕೃಷಿ ಪದವೀಧರರ ಲಭ್ಯತೆ ಬೇಡಿಕೆ - ಇವುಗಳನ್ನು ಪರಿಶೀಲಿಸಿ ಇವುಗಳ ಸಮತೋಲನದ ಮುಂಬರುವ ಪ್ರಸ್ತಾವನೆಗಳನ್ನು ಕೈಗೊಳ್ಳಬಹುದಾಗಿದೆ ಎಂದು ಪರಿಣಿತ ಸಭೆಯ ನಡೆವಳಿಯಾಗಿರುತ್ತದೆ.-ಅದರಂತೆ, ಬೀದರ್ ಜಿಲ್ಲೆಯಲ್ಲಿ ಕೃಷಿ ಮಹಾ ವಿದ್ಯಾಲಯವನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಪರಿಗಣಿಸಲು ಸಾಧ್ಯವಿರುವುದಿಲ್ಲ. |
| (ಈ) | ಪ್ರಾರಂಭಿಸುವುದಾದರೆ ಯಾವ ವರ್ಷಗಳಲ್ಲಿ ಪ್ರಾರಂಭಿಸಲಾಗುವುದು; ಇಲ್ಲವಾದಲ್ಲಿ ಅದಕ್ಕೆ ಕಾರಣವೇನು? (ವಿವರ ನೀಡುವುದು). | ಅನ್ವಯಿಸುವುದಿಲ್ಲ. |

ಸಂಖ್ಯೆ: AGRI/7/AUR/2024

(ಎನ್.ಚಲುವರಾಯಸ್ವಾಮಿ)
ಕೃಷಿ ಸಚಿವರು